# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 1162 (1028) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಐವನ್,ಡಿಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 22-08-2025 |
| ಉತ್ತರಿಸಬೇಕಾದವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಉಡುಪಿ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಕುಡುಬಿ ಸಮದಾಯದ ಜನರು ವಾಸಿಸುತ್ತಿದ್ದು, ಅವರಿಗೆ 1956ರ SC/ST ಮೀಸಲಾತಿ ಆದೇಶದಂತೆ ದಿ ಷೆಡ್ಯೂಲ್ಡ್ ಕಾಸ್ಟಸ್ ಆಂಡ್ ಷೆಡ್ಯೂಲ್ಡ್ ಟ್ರೈಬ್ ಲಿಸ್ಟ್ (ಮೋಡಿಪಿಕೇಷನ್) ಕುಡುಬಿ ಜಾತಿಯ ಹೆಸರು ಬಿಟ್ಟು ಹೋಗಿದ್ದು, ಇದನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಕುಡುಬಿ ಸಮುದಾಯದವರನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸಲು ಈ ಹಿಂದೆ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇವರ ಮೂಲಕ ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ (ಮಾನವ ಶಾಸ್ತ್ರ ವಿಭಾಗ) ಇವರಿಂದ ಕುಲಶಾಸ್ತ್ರೀಯ ಅಧ್ಯಯನ ನಡೆಸಲಾಗಿತ್ತು. ಸದರಿಯವರಿಂದ ವರದಿ ಪಡೆದು ಅದನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸಿ ಕುಡುಬಿ ಸಮುದಾಯವನ್ನು ಪರಿಶಿಷ್ಟ ಜಾತಿಗೆ ಸೇರಿಸುವ ಬದಲು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರಿಸುವ ಬಗ್ಗೆ ಹೊಸದಾಗಿ ಕುಲಶಾಸ್ತ್ರಿಯ ಅಧ್ಯಯನ ನಡೆಸಲು ತೀರ್ಮಾನಿಸಲಾಗಿತ್ತು.<br>ಅದರಂತೆ, ಕುಡುಬಿ ಜನಾಂಗವನ್ನು ಕರ್ನಾಟಕ ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರ್ಪಡೆ ಮಾಡುವ ಬಗ್ಗೆ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇವರ ಮೂಲಕ Institute for Social Economic and change (ISEC) ಇವರಿಗೆ ಕುಲ ಶಾಸ್ತ್ರೀಯ ಅಧ್ಯಯನ ಕೈಗೊಳ್ಳಲು ದಿನಾಂಕ: 23-04-2015 ರಲ್ಲಿ ಆದೇಶಿಸಲಾಗಿತ್ತು. ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಮೂಲಕ ದಿನಾಂಕ:02-02-2021 ರಂದು ISEC ಸಂಸ್ಥೆಯವರು ಸರ್ಕಾರಕ್ಕೆ ಕುಲಶಾಸ್ತ್ರೀಯ ಅಧ್ಯಯನ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ವರದಿಯಲ್ಲಿ ಕುಡುಬಿ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಶಿಫಾರಸ್ಸು ಮಾಡಿರುತ್ತಾರೆ.<br>ಸದರಿ ಕುಲಶಾಸ್ತ್ರೀಯ ಅಧ್ಯಯನ ವರದಿಯಲ್ಲಿನ ಶಿಫಾರಸ್ಸನ್ನು ಪರಿಶೀಲಿಸಿ ಪ್ರಸ್ತುತ ಕುಡುಬಿ ಸಮುದಾಯವು ಹಿಂದುಳಿದ ವರ್ಗಗಳ ಪ್ರವರ್ಗ-1ರ ಜಾತಿ ಪಟ್ಟಿಯಲ್ಲಿರುವುದರಿಂದ ಈ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಬಗ್ಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಭಿಪ್ರಾಯವನ್ನು ಕೋರಲಾಗಿತ್ತು.<br>ಪ್ರಸ್ತುತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಕುಡುಬಿ ಸಮುದಾಯವನ್ನು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರಿಸಲು ಯಾವುದೇ ಆಕ್ಷೇಪಣೆ ಇರುವುದಿಲ್ಲ ಎಂದು ದಿನಾಂಕ:11-07-2025ರಂದು ಅಭಿಪ್ರಾಯ ನೀಡಿರುತ್ತಾರೆ. ಅದರಂತೆ ಕುಡುಬಿ ಸಮುದಾಯವನ್ನು ಕರ್ನಾಟಕ ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರ್ಪಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಕುರಿತು ಪರಿಶೀಲಿಸಿ ಮುಂದಿನ ಕ್ರಮವನ್ನು ಜರುಗಿಸಲಾಗುವುದು. |
| ಆ) | ಈ ಬಗ್ಗೆ ಕೇಂದ್ರ ಸರ್ಕಾರವು ರಾಜ್ಯದಿಂದ ಯಾವುದೇ ಪ್ರಸ್ತಾವನೆ ಬಂದಿಲ್ಲ ಎಂಬ ಉತ್ತರವನ್ನು ನೀಡಿರುವುದು ನಿಜವೇ; (ವಿವರ ನೀಡುವುದು) | |
| ಇ) | ಕುಡುಬಿ ಸಮುದಾಯಕ್ಕೆ ಸಂವಿಧಾನ ಬದ್ಧವಾಗಿ ನೀಡಬೇಕಾದ ಹಕ್ಕನ್ನು ನೀಡಲು ಕ್ರಮ ಕೈಗೊಳ್ಳುವುದೇ? | |

STW/SECB/SAD/106/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ